ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಾಜ್ಯದ ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆಯಾದ ಅನುದಾನ ಕುರಿತು

ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

680 (753) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೋವಿಡ್ ಲಾಕ್‌ಡೌನ್ ಸಂದರ್ಭದಲ್ಲಿ ರಾಜ್ಯಾದ್ಯಂತ ಬಿಡುಗಡೆಯಾದ ಅನುದಾನಗಳೆಷ್ಟು ; ಖರ್ಚಾದ ಹಣವೆಷ್ಟು ; ಆದ ಕೆಲಸಗಳಾವುವು ; (ಜಿಲ್ಲಾವಾರು ಹಾಗೂ ಜಿಲ್ಲಾ ಪಂಚಾಯತವಾರು ಮಾಹಿತಿ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದೆರಡು ವರ್ಷಗಳಿಂದ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಆದ ಕೆಲಸಗಳಾವುವು ; ಎಷ್ಟು ಮಾನವ ದಿನಗಳ ಕೆಲಸ ಆಗಿದೆ ; (ಅಂಕಿ ಅಂಶ ಸಹಿತ ವಿವರ ನೀಡುವುದು)

(ಈ) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ ?